ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# 16ಕ್ಕೆ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ

## ಅಧಿವೇಶನದಲ್ಲಿ ಕೊರೊನಾ ಹಗರಣ, ಕಾಯ್ದೆ ತಿದ್ದುಪಡಿ ವಿರುದ್ಧ ಹೋರಾಟಕ್ಕೆ ಸಿದ್ಧತೆ

ಬೆಂಗಳೂರು: ಕೊರೊನಾ ಹಗರಣ, ಡ್ರಗ್ಸ್ ಜಾಲ, ಡಿ.ಜೆ.ಹಳ್ಳಿ ಗಲಭೆ, ಸರ್ಕಾರದಲ್ಲಿನ ಭ್ರಷ್ಟಾಚಾರ ಹಾಗೂ ವಿಧೇಯಕಗಳ ಕುರಿತು ವಿಧಾನ ಮಂಡಲದ ಅಧಿವೇಶನದಲ್ಲಿ ಸರ್ಕಾರವನ್ನು ಪ್ರಶ್ನಿಸಲು ನಿರ್ಧರಿಸಲಾಗಿದೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಹೇಳಿದ್ದಾರೆ.

ಪಕ್ಷದ ಶಾಸಕರೊಂದಿಗೆ ಝೂಮ್ ಆ್ಯಪ್ ಮೂಲಕ ಚರ್ಚೆ ನಡೆಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿ, ವಿಧಾನ ಮಂಡಲ ಅಧಿವೇಶನ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಸೆ.16ರಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ. ಈ ಸಭೆಯಲ್ಲಿ ಸದನದಲ್ಲಿ ಕೈಗೆತ್ತಿಕೊಳ್ಳಬೇಕಾದ ವಿಷಯಗಳ ಬಗ್ಗೆ ಉಭಯ ಸದನದ ಪಕ್ಷದ ಸದಸ್ಯರ ಜತೆ ಸಮಗ್ರವಾಗಿ ಚರ್ಚಿಸಲಾಗುವುದು ಎಂದು ಹೇಳಿದರು.

ಇನ್ನು ಡ್ರಗ್ ಮಾಫಿಯಾ ಎಲ್ಲ ಕಾಲದಲ್ಲಿಯೂ ಇತ್ತು. ನಮ್ಮ ಸರ್ಕಾರದ ಅವಧಿಯಲ್ಲಿ ಈ ಮಾಫಿಯಾಕ್ಕೆ ಕಡಿವಾಣ ಹಾಕುವ ಪ್ರಯತ್ನ ನಡೆದಿತ್ತು. ಎನ್‌ಸಿಬಿಯವರು ಈಗ ತನಿಖೆ ಕೈಗೆತ್ತಿಕೊಂಡಿದ್ದಾರೆ. ಸಿಸಿಬಿಯೂ ತನಿಖೆಯಲ್ಲಿ ಕೈ ಜೋಡಿಸಿದೆ. ವಿದ್ಯಾರ್ಥಿಗಳು, ಸಿನಿಮಾ ನಟರು, ರಾಜಕಾರಣಿಗಳು, ಅವರ ಮಕ್ಕಳು ಸೇರಿ ಈ ಮಾಫಿಯಾದಲ್ಲಿ ಯಾರೇ ಭಾಗಿಯಾಗಿದ್ದರೂ ಶಿಕ್ಷೆಯಾಗಲಿ. ತಪ್ಪು ಮಾಡಿದವರು ಶಿಕ್ಷೆ ಅನುಭವಿಸಬೇಕು. ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯ ಕ್ರಮ ಕೈಗೊಳ್ಳಲಿ. ಅದಕ್ಕೆ ನಮ್ಮ ಸಂಪೂರ್ಣ ಸಹಕಾರವಿದೆ ಎಂದರು.

ಪೊಲೀಸರ ಬಳಿ ಸಾಕ್ಷ್ಯಾಧಾರ ಇದ್ದರೆ ಯಾರ ವಿರುದ್ಧವಾದರೂ ಕ್ರಮ ಕೈಗೊಳ್ಳಲಿ. ನಟಿ ರಾಗಿಣಿಗೂ ನಮಗೂ ಸಂಬಂಧ ಇಲ್ಲ ಎಂದು ಬಿಜೆಪಿಯವರು ಹೇಳುತ್ತಾರೆ. ಆದರೆ, ಅವರು ಚುನಾವಣಾ ಪ್ರಚಾರದಲ್ಲಿ ಬಿಜೆಪಿ ನಾಯಕರ ಜತೆ ಭಾಗಿಯಾಗಿರುವ ಫೋಟೋ ಮತ್ತು ವಿಡಿಯೋ ಇದೆ. ತನಿಖೆ ನಡೆಯಲಿ. ಡ್ರಗ್ ಮಾಫಿಯಾದಲ್ಲಿ ಭಾಗಿಯಾದವರನ್ನು ತನಿಖೆಯಿಂದ ಪಾರು ಮಾಡಲು ಪ್ರಭಾವಿಗಳು ಒತ್ತಡ ಹೇರುತ್ತಿದ್ದಾರೆ ಎಂದು ಮಾತಿಗೆ ಹೇಳಬಾರದು. ಆ ಕುರಿತಾಗಿ ಅಧಿವೇಶನದಲ್ಲಿಯೂ ಚರ್ಚೆ ಮಾಡಲು ನಿರ್ಧರಿಸಿದ್ದೇವೆ ಎಂದು ಹೇಳಿದರು.

ಡ್ರಗ್ ಮಾಫಿಯಾದಲ್ಲಿ ಶಾಸಕ ಜಮೀರ್ ಅಹಮದ್ ಅವರು ಭಾಗಿಯಾಗಿದ್ದಾರೆ ಎಂಬುದಕ್ಕೆ ಪುರಾವೆ ಇದೆಯೇ? ಸಾಕ್ಷ್ಯ ಇದ್ದರೆ ಪೊಲೀಸರಿಗೆ ತೋರಿಸಲಿ. ರಾಜಕಾರಣಕ್ಕಾಗಿ ಸುಖಾಸುಮ್ಮನೆ ಒಬ್ಬರ ವಿರುದ್ಧ ಆರೋಪ ಮಾಡುವುದು ಸರಿಯಲ್ಲ. ಸಾಕ್ಷ್ಯಾಧಾರ ಸಿಕ್ಕರೆ ಪೊಲೀಸರು ಕ್ರಮ ಕೈಗೊಳ್ಳಲಿ. ಅದಕ್ಕೆ ನಾವು ಅಡ್ಡಿಪಡಿಸುವ ಪ್ರಶ್ನೆಯೇ ಇಲ್ಲ. ಡ್ರಗ್ ಮಾಫಿಯಾ ನಿಯಂತ್ರಣಕ್ಕೆ ಸರ್ಕಾರ ಕಠಿಣವಾದ ಕಾನೂನು ಜಾರಿಗೆ ತರಲಿ. ಅದಕ್ಕೆ ನಮ್ಮ ಪಕ್ಷ ಸಂಪೂರ್ಣ ಸಹಕಾರ ನೀಡಲಿದೆ ಎಂದರು.



ಸಿದ್ದರಾಮಯ್ಯ ಅವರು ಕಾಂಗ್ರೆಸ್ ಶಾಸಕರೊಂದಿಗೆ ಝೂಮ್ ಆ್ಯಪ್ ಮೂಲಕ ಚರ್ಚೆ ನಡೆಸಿದರು.

## ಕೊರೊನಾ: ಭಾರತ ನಂ.1 ಮಾಡುವುದೇ ಮೋದಿ ಮಾದರಿ



ಬೆಂಗಳೂರು: ವಿಶ್ವದಲ್ಲಿ ಕೊರೊನಾ ಸೋಂಕಿತರ ಸಂಖ್ಯೆಯಲ್ಲಿ ಭಾರತವನ್ನು ಮೊದಲ ಸ್ಥಾನಕ್ಕೆ ತರುವುದೇ ಪ್ರಧಾನಿ ನರೇಂದ್ರ ಮೋದಿ ಮಾದರಿ ಎಂದು ಕೆಪಿಸಿಸಿ ಮಾಜಿ ಅಧ್ಯಕ್ಷ ದಿನೇಶ್ ಗುಂಡೂರಾವ್ ವ್ಯಂಗ್ಯವಾಡಿದ್ದಾರೆ.

ಈ ಕುರಿತು ಟ್ವೀಟ್ ಮಾಡಿ, ವಿಶ್ವದಲ್ಲಿ ಭಾರತ ಮೊದಲ ಸ್ಥಾನಕ್ಕೇರುತ್ತಿದ್ದರೆ, ಕರ್ನಾಟಕ ಸರ್ಕಾರ ದೇಶದಲ್ಲಿಯೇ ಎರಡನೇ ಸ್ಥಾನಕ್ಕೆ ಏರಿದೆ. ಕೊರೊನಾ ವಿರುದ್ಧ ಮೋದಿಯವರ ಕ್ರಮ ಇಡೀ ವಿಶ್ವಕ್ಕೇ ಮಾದರಿ ಎಂದು ಬಿಜೆಪಿ ನಾಯಕರು ಬಿಂಬಿಸಿಕೊಂಡಿದ್ದರು. ಆದರೆ, ಕೊರೊನಾ ಸೋಂಕಿತರಲ್ಲಿ ಭಾರತವನ್ನು ಮೊದಲ ಸ್ಥಾನಕ್ಕೆ ತರುವುದೇ ಮೋದಿ ಮಾದರಿ ಎಂದು ಅರ್ಥವಾಗಿದ್ದೇ ಈಗ ಎಂದು ಹೇಳಿದ್ದಾರೆ. ಕರ್ನಾಟಕ ರಾಜ್ಯವೂ ಕೊರೊನಾ ಸೋಂಕಿತರ ಹೆಚ್ಚಳದಲ್ಲಿ ದೇಶದಲ್ಲಿ ಎರಡನೇ ಸ್ಥಾನಕ್ಕೇರಿದ್ದು ಇನ್ನು ಕೆಲವೇ ದಿನಗಳಲ್ಲಿ ನಮ್ಮ ರಾಜ್ಯವೂ ನಂ.1 ಆಗುವುದರಲ್ಲಿ ಅನುಮಾನವೇನಿಲ್ಲ ಎಂದು ದಿನೇಶ್ ಗುಂಡೂರಾವ್ ಹೇಳಿದ್ದಾರೆ.

# ಸರ್ಕಾರಕ್ಕೆ 1200 ಪ್ರಶ್ನೆಗಳು

**ಅಧಿವೇಶನದಲ್ಲಿ ಚರ್ಚಿಸಬೇಕಾದ ವಿಷಯಗಳ ಕುರಿತು ಶಾಸಕರೊಂದಿಗೆ ಸಿದ್ದರಾಮಯ್ಯ ವಿಡಿಯೋ ಸಂವಾದ**

ಬೆಂಗಳೂರು: ಸೆ.21ರಿಂದ ಆರಂಭವಾಗುವ ವಿಧಾನ ಮಂಡಲ ಅಧಿವೇಶನದಲ್ಲಿ ಕಾಂಗ್ರೆಸ್ ಪಕ್ಷದ ಶಾಸಕರು 1,200ಕ್ಕೂ ಹೆಚ್ಚು ಪ್ರಶ್ನೆಗಳನ್ನು ಸರ್ಕಾರದ ಮುಂದೆ ಇಡಲು ತೀರ್ಮಾನಿಸಿದ್ದಾರೆ. ಪ್ರಶ್ನೆಗಳು ಈಗಾಗಲೇ ಸಿದ್ಧವಾಗಿದ್ದು ಅದನ್ನು ವಿಧಾನಸಭೆ ಹಾಗೂ ವಿಧಾನ ಪರಿಷತ್ ಸಚಿವಾಲಯಕ್ಕೆ ಸಲ್ಲಿಸುವಂತೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಪಕ್ಷದ ಶಾಸಕರಿಗೆ ಮನವಿ ಮಾಡಿದ್ದಾರೆ.

ವಿಧಾನ ಮಂಡಲ ಅಧಿವೇಶನದಲ್ಲಿ ಚರ್ಚೆಗೆ ಕೈಗೆತ್ತಿಕೊಳ್ಳಬೇಕಾದ ವಿಷಯಗಳ ಕುರಿತು ಸೋಮವಾರದ ಶಾಸಕರೊಂದಿಗೆ ವಿಡಿಯೋ ಸಂವಾದ ನಡೆಸಿ, ಮಾಜಿ ಸಚಿವರ ತಂಡ ಪ್ರಶ್ನೆಗಳನ್ನು ಸಿದ್ಧಪಡಿಸಿದ್ದು ಈ ವಿಷಯದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಕಚೇರಿ ಹಾಗೂ ವಿಧಾನಸಭೆ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರ ಕಚೇರಿ ಶಾಸಕರಿಗೆ ನೆರವಾಗಲಿದೆ ಎಂದು ಹೇಳಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಸಿದ್ದರಾಮಯ್ಯ, ವಿಧಾನಸಭೆ ಮತ್ತು ವಿಧಾನ ಪರಿಷತ್ ಸದಸ್ಯರು ಕಲಾಪದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕೆಂದು ಮನವಿ ಮಾಡಿದರು. ರಾಜ್ಯ ಸರ್ಕಾರ ಹಲವಾರು ವಿಷಯಗಳಲ್ಲಿ ಎಡವಿದೆ. ಕೊರೊನಾ ಸೋಂಕು ನಿಯಂತ್ರಣದಲ್ಲಂತೂ ಸಂಪೂರ್ಣ ವಿಫಲವಾಗಿದೆ. ಈ ಕುರಿತು ಅಧಿವೇಶನದಲ್ಲಿ ಸಮಗ್ರವಾಗಿ ಚರ್ಚೆ ನಡೆಸಬೇಕಿದೆ. ಕೋವಿಡ್ ಉಪಕರಣಗಳ ಖರೀದಿಯಲ್ಲಿ ಆಗಿರುವ ಅವ್ಯವಹಾರದ ಬಗ್ಗೆಯೂ ಕಾಂಗ್ರೆಸ್ ಪಕ್ಷ ಸದನದಲ್ಲಿ ಗಂಭೀರವಾಗಿ ಪ್ರಶ್ನೆ ಮಾಡಬೇಕಿದೆ ಎಂದು ಹೇಳಿದರು.

ಸ್ವರ್ಗ ಸೃಷ್ಟಿ ಮಾಡುತ್ತೇವೆ ಎಂದಿದ್ದ ಯಡಿಯೂರಪ್ಪ ಅವರು ಉಸಿರು ಎತ್ತುತ್ತಿಲ್ಲ. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ಈ ಕುರಿತು ಮಂತ್ರಿಗಳೇ ಮಾತನಾಡುತ್ತಿದ್ದಾರೆ. ಪರ್ಸೆಂಟೇಜ್ ಕೊಡದ ಶಾಸಕರ ಕ್ಷೇತ್ರಗಳಿಗೆ ಅನುದಾನ ಇಲ್ಲ ಎಂಬಂತೆ ಆಗಿದೆ. ಬಿಜೆಪಿ ಮಂತ್ರಿಗಳ ಕ್ಷೇತ್ರದಲ್ಲೂ ಅನುದಾನಕ್ಕಾಗಿ ಲಂಚ ನೀಡಬೇಕಾದ ವಾತಾವರಣ ನಿರ್ಮಾಣವಾಗಿದೆ. ಈ ಕುರಿತಾಗಿಯೂ ಸದನದಲ್ಲಿ ಚರ್ಚೆ ಕೈಗೆತ್ತಿಕೊಳ್ಳಬೇಕಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ್, ಹಿರಿಯ ನಾಯಕರಾದ ಎಚ್.ಕೆ. ಪಾಟೀಲ್, ಆರ್.ವಿ. ದೇಶಪಾಂಡೆ ಸೇರಿದಂತೆ ವಿಧಾನಸಭೆ ಹಾಗೂ ವಿಧಾನ ಪರಿಷತ್ ಸದಸ್ಯರು ಚರ್ಚೆಯಲ್ಲಿ ಭಾಗಿಯಾಗಿದ್ದರು. ಕಾಂಗ್ರೆಸ್ ಶಾಸಕಾಂಗ ಪಕ್ಷದ ಕಾರ್ಯದರ್ಶಿ ತುಕಾರಾಂ, ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕ ಅಜಯ್ ಸಿಂಗ್, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ನಾರಾಯಣಸ್ವಾಮಿ ಅವರು ಹಾಜರಿದ್ದರು.